ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಮಾನ್ಯ ಮಂತ್ರಿಗಳು ಈಗ ದಯವಿಟ್ಟು ವಿಧೇಯಕವನ್ನು ಮಂಡಿಸಬೇಕು

ಶ್ರೀ ಎಸ್.ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು)(ಮಾನ್ಯ ಮುಖ್ಯಮಂತ್ರಿಗಳ ಪರವಾಗಿ) :- ಮಾನ್ಯ ಅಧ್ಯಕ್ಷರೆ, ೨೦೧೨ನೇ ಸಾಲಿನ ಕರ್ನಾಟಕ ವಿಧಾನಮಂಡಲದವರ ವೇತನ, ನಿವೃತ್ತಿ ವೇತನಮತ್ತು ಭತ್ಯೆಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಮಂಡಿಸುತ್ತೇನೆ.

ಅಧ್ಯಕ್ಷರು :- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–3)

2.ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ ವಿಧೇಯಕ, ೨೦೧೨

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಸ್.ಎ.ರಾಮದಾಸ್ (ವೈದ್ಯಕೀಯ ಶಿಕ್ಷಣ ಸಚಿವರು):- ಮಾನ್ಯ ಅಧ್ಯಕ್ಷರೆ, ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ)ಪ್ರಾಧಿಕಾರ ವಿಧೇಯಕ, ೨೦೧೨ನ್ನು ಮಂಡಿಸಲು ಅನುಮತಿ ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ:

೨೦೧೨ನೇ ಸಾಲಿನ **ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ) ಪ್ರಾಧಿಕಾರ ವಿಧೇಯಕ, ೨೦೧೨** ವಿಧೇಯಕವನ್ನು ಮಂಡಿಸಲು ಸಭೆಯು ಅನುಮತಿ ನೀಡಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ

ಪ್ರಸ್ತಾವವು ಅಂಗೀಕೃತವಾಗಿದೆ.

ಅಧ್ಯಕ್ಷರು:- ಮಾನ್ಯ ಸಚಿವರು ವಿಧೇಯಕವನ್ನು ಮಂಡಿಸಬೇಕು.

ಶ್ರೀ ಎಸ್.ಎ.ರಾಮದಾಸ್ (ವೈದ್ಯಕೀಯ ಶಿಕ್ಷಣ ಸಚಿವರು):- ಮಾನ್ಯ ಅಧ್ಯಕ್ಷರೆ,ಕರ್ನಾಟಕ ನರ್ಸಿಂಗ್ ಮತ್ತು ಅರೆವೈದ್ಯಕೀಯ ವಿಜ್ಞಾನಗಳ ಶಿಕ್ಷಣ(ನಿಯಂತ್ರಣ)ಪ್ರಾಧಿಕಾರ ವಿಧೇಯಕ, ೨೦೧೨ಅನ್ನು ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–4)

೩. **ಕರ್ನಾಟಕ ಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ ವಿಧೇಯಕ, ೨೦೧೨.**

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು):- ಮಾನ್ಯ ಅಧ್ಯಕ್ಷರೆ, ಕರ್ನಾಟಕಲಿಫ್ಟ್‌ಗಳ, ಎಸ್ಕಲೇಟರ್‌ಗಳ ಮತ್ತು ಪ್ಯಾಸೆಂಜರ್ ಕನ್ವೇಯರ್‌ಗಳ ವಿಧೇಯಕ, ೨೦೧೨ ಅನ್ನು ಮಂಡಿಸಲು ಅನುಮತಿ ಕೋರುತ್ತಿದ್ದೇನೆ.

ಅಧ್ಯಕ್ಷರು :- ಪ್ರಸ್ತಾವನೆ ಮಂಡಿಸಲಾಯಿತು.

ಈಗ ಪ್ರಸ್ತಾವನೆಯನ್ನು ಸಭೆಯ ಮತಕ್ಕೆ ಹಾಕುತ್ತೇನೆ.

ಪ್ರಸ್ತಾವನೆ ಹೀಗಿದೆ: